# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಅನುದಾನಿತ ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ 8 ಸ್ಥಗಿತ ವೇತನ ಬಡ್ತಿ ನೀಡುವ ಬಗ್ಗೆ.

ಓದಲಾಗಿದೆ : 1) ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 12 ಎಸ್‌ಆರ್‌ಪಿ 2012(vii) ದಿ: 14-6-2012.

2) ಆಯುಕ್ತರು, ಸಾ.ಶಿ.ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆಸಿ7(2)/ಪ್ರಾಶಿಅ/ಸ್ಥ.ವೇ.ಬ.26/13-14, ದಿ:27-8-2013, 27-12-2014 ಮತ್ತು 1-4-2016.

* * * * *

ಪ್ರಸ್ತಾವನೆ :-

ಮೇಲೆ ಓದಲಾದ (1)ರ ಆದೇಶದಲ್ಲಿ ರಾಜ್ಯ ವೇತನ ಶ್ರೇಣಿಯ ಗರಿಷ್ಠ ಹಂತವನ್ನು ತಲುಪಿ ಸ್ಥಗಿತಗೊಂಡಿರುವ ಸರ್ಕಾರಿ ನೌಕರರಿಗೆ ಪ್ರಸ್ತುತ ನೀಡುತ್ತಿರುವ 5 ಸ್ಥಗಿತ ವೇತನ ಬಡ್ತಿಗಳನ್ನು 8 ಸ್ಥಗಿತ ವೇತನ ಬಡ್ತಿಗಳಿಗೆ ದಿನಾಂಕ: 1ನೇ ಏಪ್ರಿಲ್ 2012ರಿಂದ ಜಾರಿಗೆ ಬರುವಂತೆ ಹೆಚ್ಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರು ರಾಜ್ಯದಲ್ಲಿ 222 ಖಾಸಗಿ ಅನುದಾನಿತ ಕಿರಿಯ ಪ್ರಾಥಮಿಕ ಶಾಲೆಗಳು, 2586 ಖಾಸಗಿ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಗಳು, 3557 ಖಾಸಗಿ ಅನುದಾನಿತ ಪ್ರೌಢಶಾಲೆಗಳು ಇದ್ದು, ಈ ಶಾಲೆಗಳಲ್ಲಿನ ಸಿಬ್ಬಂದಿ ವರ್ಗದವರಿಗೆ ಸರ್ಕಾರಿ ಶಾಲೆಗಳ ಬೋಧಕ/ಬೋಧಕೇತರ ಸಿಬ್ಬಂದಿಯವರಿಗೆ ನೀಡುತ್ತಿರುವ ವೇತನ/ವೇತನ ಶ್ರೇಣಿ, ತುಟ್ಟಿಭತ್ಯೆ, ಮತ್ತು ಇತರ ಭತ್ಯೆಗಳನ್ನು ಕಾಲಕಾಲಕ್ಕೆ ವಿಸ್ತರಿಸುತ್ತಿದೆ. ಸರ್ಕಾರದ ಆದೇಶ ದಿನಾಂಕ 14-6-2012ರಲ್ಲಿ ಸರ್ಕಾರಿ ನೌಕರರಿಗೆ 5 ರಿಂದ 8 ಸ್ಥಗಿತ ವೇತನ ಬಡ್ತಿಗಳನ್ನು ದಿನಾಂಕ 1-4-2012ರಿಂದ ಜಾರಿಗೆ ಬರುವಂತೆ ಆದೇಶಿಸಿದ್ದು, ಅದರಂತೆ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜು ಸಿಬ್ಬಂದಿ ವರ್ಗದವರಿಗೆ ಹಾಲಿ ನೀಡುತ್ತಿರುವ 5 ಸ್ಥಗಿತ ವೇತನ ಬಡ್ತಿಗಳನ್ನು 8ಕ್ಕೆ ಹೆಚ್ಚಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಇಡಿ 19 ಪಿಎಂಸಿ 2013, ಬೆಂಗಳೂರು, ದಿನಾಂಕ: 6-7-2016.

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದಿಂದ ವೇತನ ಪಡೆಯುತ್ತಿರುವ ಖಾಸಗಿ ಅನುದಾನಿತ ಪ್ರಾಥಮಿಕ/ಪ್ರೌಢ/ಕಾಲೇಜು ಸಿಬ್ಬಂದಿ ವರ್ಗದವರಿಗೆ ಭವಿಷ್ಯಾನ್ವಯವಾಗಿ ಅನ್ವಯವಾಗುವಂತೆ ಸ್ಥಗಿತ ವೇತನ ಬಡ್ತಿಗಳ ಮಿತಿಗಳನ್ನು 5 ರಿಂದ 8 ಕ್ಕೆ ಹೆಚ್ಚಿಸಲು ಆದೇಶಿಸಿದೆ. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 3 ಎಸ್‌ಆರ್‌ಪಿ, 96, ದಿ: 18-3-1996ರಲ್ಲಿ ವಿಧಿಸಿರುವ ಷರತ್ತುಗಳು ಈ ಆದೇಶಕ್ಕೆ ಯಥಾವತ್ತಾಗಿ ಅನ್ವಯಿಸುತ್ತವೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಎಫ್‌ಡಿ 262 ವೆಚ್ಚ-8/2016, ದಿ: 6-6-2016ರಂದು ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಶರಣಬಸಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಭಾರ)
ಶಿಕ್ಷಣ ಇಲಾಖೆ (ಪ್ರಾಥಮಿಕ)

ಸಂಕಲನಕಾರರು, ಕರ್ನಾಟಕ ರಾಜ್ಯ ವಿಶೇಷ ಪತ್ರ, ಬೆಂಗಳೂರು – ಈ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ವಿಶೇಷ ಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 500 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.

**ಇವರಿಗೆ :**

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು,
2. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ
4. ನಿರ್ದೇಶಕರು, ಪ್ರಾಥಮಿಕ/ಪ್ರೌಢ/ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಧಾರವಾಡ/ಕಲಬುರಗಿ
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಆಡಳಿತ)/ ಉಪನಿರ್ದೇಶಕರು (ಅಭಿವೃದ್ಧಿ)/ಕ್ಷೇತ್ರ ಶಿಕ್ಷಣಾಧಿಕಾರಿಗಳು/ಕ್ಷೇತ್ರ ಸಂಪನ್ಮೂಲ ಅಧಿಕಾರಿಗಳು – ಸಂಬಂಧಿಸಿದ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಮುಖಾಂತರ
6. ರಾಜ್ಯದ ಎಲ್ಲಾ ಜಂಟಿ ನಿರ್ದೇಶಕರು/ಉಪ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.